# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದಲ್ಲಿ ವಿವಿಧ ಕೋರ್ಸ್‌ಗಳನ್ನು ಪ್ರಾರಂಭಿಸಲು ಕನಿಷ್ಠ ವಿದ್ಯಾರ್ಥಿಗಳ ದಾಖಲಾತಿಗೆ ವಿನಾಯಿತಿ ನೀಡುವಂತೆ ಕೋರಿರುವ ಕುರಿತು.

**ಓದಲಾಗಿದೆ:** ಕುಲಸಚಿವರು, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ ಇವರ ಪತ್ರ ಸಂ. ಕೆಎಸ್‌ಜಿಹೆಚ್/ಸಂಪ್ರಕವಿ/2022-23/544, ದಿನಾಂಕ:09.01.2022/2023.

*********

**ಪ್ರಸ್ತಾವನೆ:**

ಮೇಲೆ ಓದಲಾದ ಪತ್ರದಲ್ಲಿ, ವಿಶ್ವವಿದ್ಯಾಲಯದಲ್ಲಿ ಯಾವುದೇ ಕೋರ್ಸ್ ಪ್ರಾರಂಭ ಮಾಡಲು ಕನಿಷ್ಠ 10 ವಿದ್ಯಾರ್ಥಿಗಳ ಭಾಷಾ ಪದವಿಗಳ ದಾಖಲಾತಿಯನ್ನು ಕಡ್ಡಾಯಗೊಳಿಸಲಾಗಿದೆ. 10 ವಿದ್ಯಾರ್ಥಿಗಳಿಗಿಂತ ಕಡಿಮೆ ಸಂಖ್ಯೆ ವಿದ್ಯಾರ್ಥಿಗಳು, ಸಂಬಂಧಪಟ್ಟ ಕೋರ್ಸ್‌ಗಳಿಗೆ ದಾಖಲಾತಿ ಹೊಂದಿದಲ್ಲಿ, ದಾಖಲಾತಿ ಹೊಂದಿರುವ ವಿದ್ಯಾರ್ಥಿಗಳನ್ನು ಬೇರೆ ವಿಶ್ವವಿದ್ಯಾಲಯಕ್ಕೆ ದಾಖಲು ಮಾಡಿಕೊಳ್ಳಲು ಸೂಚಿಸುವಂತೆ ತಿಳಿಸಲಾಗಿರುತ್ತದೆ. ಕರ್ನಾಟಕ ರಾಜ್ಯ ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯವನ್ನು ಸಂಗೀತ ಮತ್ತು ಪ್ರದರ್ಶನ ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಹಾಗೂ ಪ್ರಸಾರಕ್ಕಾಗಿ ಸ್ಥಾಪಿಸಲಾಗಿದ್ದು, ಇಲ್ಲಿ ಪ್ರತಿ ಕೋರ್ಸ್‌ಗೆ ಕನಿಷ್ಠ 10 ವಿದ್ಯಾರ್ಥಿಗಳು ದಾಖಲಾತಿ ಹೊಂದಿದ್ದಲ್ಲಿ ಮಾತ್ರ ಪಾರಂಭಿಸಲು ಸೂಚಿಸಿರುವುದರಿಂದ, ವಿಶ್ವವಿದ್ಯಾಲಯದ ಸ್ಥಾಪನೆಯ ಉದ್ದೇಶ ಈಡೇರಿದಂತಾಗುವುದಿಲ್ಲ. ಅಲ್ಲದೇ ಈ ವಿಶ್ವವಿದ್ಯಾಲಯಕ್ಕೆ ಪ್ರವೇಶ ಪಡೆಯುವ ವಿದ್ಯಾರ್ಥಿಗಳು ಸಂಗೀತ ಮತ್ತು ಪ್ರದರ್ಶನಾದಿ ಕಲೆಗಳಲ್ಲಿ ಸರ್ಟಿಫಿಕೇಟ್ ಡಿಪ್ಲೊಮೊ ಹಾಗೂ ಕರ್ನಾಟಕ ಸರ್ಕಾರ ಜೂನಿಯರ್ ಸೀನಿಯರ್ ಅಥವಾ ವಿವಿಧ ರಾಜ್ಯಗಳ ಸಂಗೀತಾದಿ, ಪ್ರದರ್ಶನ ಕಲೆಗಳ ಸಾಲಿನ ಡಿಪ್ಲೊಮೊ ಅಲ್ಪಮಟ್ಟಿನ ತರಬೇತಿ ಪಡೆದಿರುವವರಾಗಿರಬೇಕಾಗಿದ್ದು, ಅಂತಹ ವಿದ್ಯಾರ್ಥಿಗಳು ಮಾತ್ರ ಈ ವಿಶ್ವವಿದ್ಯಾಲಯದಲ್ಲಿ ದಾಖಲಾತಿ ಹೊಂದಲು ಸಾಧ್ಯವಿರುತ್ತದೆ. ಈ ಕೋರ್ಸ್‌ಗಳು ಸಾಮಾನ್ಯ ವಿಶ್ವವಿದ್ಯಾಲಯಗಳಲ್ಲಿ ಇಲ್ಲದೇ ಇರುವುದರಿಂದ ಸದರಿ ವಿದ್ಯಾರ್ಥಿಗಳ ಉನ್ನತ ಶಿಕ್ಷಣದ ಹಕ್ಕನ್ನು ಮೊಟಕುಗೊಳಿಸಿದಂತಾಗುತ್ತದೆ. ಆದ್ದರಿಂದ, ಸಾಮಾನ್ಯ ವಿಶ್ವವಿದ್ಯಾಲಯದ ಪ್ರವೇಶಕ್ಕೆ ನಿಗದಿಪಡಿಸಿರುವಂತೆ ಕನಿಷ್ಠ ಸಂಖ್ಯೆ ವಿದ್ಯಾರ್ಥಿಗಳ ಪ್ರವೇಶಾತಿಯನ್ನು ನಿಗದಿಗೊಳಿಸುವುದು ಈ ವಿಶ್ವವಿದ್ಯಾಲಯಕ್ಕೆ ಅನುಗುಣವಾಗಿರುವುದಿಲ್ಲ. ಈ ಹಿನ್ನೆಲೆಯಲ್ಲಿ ಪ್ರತಿ ಕೋರ್ಸಿನ ಆರಂಭಕ್ಕೆ ಕನಿಷ್ಠ 10 ವಿದ್ಯಾರ್ಥಿಗಳ ಸಂಖ್ಯೆ ನಿಗದಿಗೊಳಿಸಿರುವುದನ್ನು ಸಂಗೀತ ವಿಶ್ವವಿದ್ಯಾಲಯಕ್ಕೆ

....2

ವಿನಾಯಿತಿ ನೀಡಿ 10 ಕ್ಕಿಂತಲೂ ಕಡಿಮೆ ವಿದ್ಯಾರ್ಥಿಗಳು ದಾಖಲಾಗಿರುವ ಕೋರ್ಸನ್ನು 2022-23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಾರಂಭಿಸಲು ಅನುಮತಿ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ , ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 53 ಯುಎನ್‌ಇ 2023, ಬೆಂಗಳೂರು**
**ದಿನಾಂಕ: 29.05.2023**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಸಂಗೀತ ಮತ್ತು ಪ್ರದರ್ಶನಾದಿ ಕಲೆಗಳನ್ನು ಉಳಿಸಿ ಬೆಳೆಸುವ ವಿಶ್ವವಿದ್ಯಾಲಯದ ಧ್ಯೇಯೋದ್ದೇಶಗಳ ಹಿತದೃಷ್ಟಿಯಿಂದ, ಕರ್ನಾಟಕ ರಾಜ್ಯ ಡಾ: ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದಲ್ಲಿ ಪ್ರತಿ ಕೋರ್ಸಿಗೆ ಕನಿಷ್ಠ 10 ಕ್ಕಿಂತಲೂ ಕಡಿಮೆ ವಿದ್ಯಾರ್ಥಿಗಳು ದಾಖಲಾಗಿರುವ ಕೋರ್ಸ್‌ಗಳಿಗೆ ವಿನಾಯಿತಿ ನೀಡಿ ಸದರಿ ಕೋರ್ಸ್‌ಗಳನ್ನು 2022-23ನೇ ಶೈಕ್ಷಣಿಕ ಸಾಲಿನಲ್ಲಿ ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಶೀತಲ್ ಎಂ. ಹಿರೇಮಠ),
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ-1).

ಗೆ,

1. ಕುಲಸಚಿವರು, ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಗಾಂಧಿನಗರ, ಬೆಂಗಳೂರು.

**ಪ್ರತಿ:**

1. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
3. ಮಾನ್ಯ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ರಾಜಭವನ, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).
5. ಶಾಖಾ ರಕ್ಷಾ, ಕಡತ/ಹೆಚ್ಚುವರಿ ಪ್ರತಿ.